All India Radio: Bangalore
National Bulletin In Kannada
12.05.2026 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ರಾಷ್ಟ್ರೀಯ ಸಂಪನ್ಮೂಲಗಳ ಸಂರಕ್ಷಣೆಗೆ ಪ್ರಧಾನಿ ನರೇಂದ್ರ ಮೋದಿ ಕರೆ : ಪಶ್ಚಿಮಏಷ್ಯಾ ಸಂಘರ್ಷ ದಶಕದ ಅತಿದೊಡ್ಡ ಬಿಕ್ಕಟ್ಟೆಂದು ಬಣ್ಣನೆ
2. ಇದೇ ೧೫ರಿಂದ ಪಂಚರಾಷ್ಟ್ರ ಪ್ರವಾಸ ಕೈಗೊಳ್ಳಲಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ
3. ಅಸ್ಸಾಂ ಮುಖ್ಯಮಂತ್ರಿಯಾಗಿ ಇಂದು ಹಿಮಂತ ಬಿಸ್ವಾ ಸರ್ಮಾ ಪ್ರಮಾಣವಚನ ಸ್ವೀಕಾರ
4. ಅಮೆರಿಕ-ಇರಾನ್ ಕದನ ವಿರಾಮ ಪರಿಸ್ಥಿತಿ ಅತ್ಯಂತ ದುರ್ಬಲ ; ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್
5. ಐಪಿಎಲ್ ಟಿ-೨೦ ಕ್ರಿಕೆಟ್ ; ಪಂಜಾಬ್ ಕಿಂಗ್ಸ್ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ ತಂಡಕ್ಕೆ ೩ ವಿಕೆಟ್‌ಗಳ ಜಯ

<><><><>

ಪಶ್ಚಿಮ ಏಷ್ಯಾದ ಸಂಘರ್ಷವನ್ನು ಈ ದಶಕದ ಅತಿದೊಡ್ಡ ಬಿಕ್ಕಟ್ಟು ಎಂದು ಬಣ್ಣಿಸಿರುವ ಪ್ರಧಾನಿ ನರೇಂದ್ರ ಮೋದಿ, ರಾಷ್ಟ್ರೀಯ ಸಂಪನ್ಮೂಲಗಳ ಮೇಲಿನ ಹೊರೆಯನ್ನು ತಗ್ಗಿಸಲು ನಾಗರಿಕರು ಒಗ್ಗಟ್ಟಿನಿಂದ ಶ್ರಮಿಸಬೇಕು ಎಂದು ಕರೆ ನೀಡಿದ್ದಾರೆ. ಗುಜರಾತ್‌ನ ವಡೋದರಾದಲ್ಲಿ ನಿನ್ನೆ ಸರ್ದಾರ್ ಧಾಮ್ ವಿದ್ಯಾರ್ಥಿ ನಿಲಯವನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ಜಾಗತಿಕ ಪರಿಸ್ಥಿತಿ ದೇಶದ ಜನರ ಮೇಲೆ ಕನಿಷ್ಠ ಪರಿಣಾಮ ಬೀರುವಂತೆ ಸರ್ಕಾರ ನಿರಂತರ ಪ್ರಯತ್ನ ನಡೆಸುತ್ತಿದೆ ಎಂದು ತಿಳಿಸಿದರು. ಇದೇ ವೇಳೆ ಅವರು, ಪೆಟ್ರೋಲ್, ಡೀಸೆಲ್ ಉಳಿತಾಯ, ಅಡಿಗೆ ಎಣ್ಣೆಯ ಮಿತ ಬಳಕೆ, ಸ್ವದೇಶಿ ಉತ್ಪನ್ನಗಳ ಬಳಕೆ ಸೇರಿದಂತೆ ತಮ್ಮ ಏಳು ಮನವಿಗಳನ್ನು ಪುನರುಚ್ಚರಿಸಿದರು. ಸರ್ದಾರ್ ವಲ್ಲಭಭಾಯಿ ಪಟೇಲ್ ಅವರನ್ನು ಸ್ಮರಿಸಿದ ಪ್ರಧಾನಿ, ಪಟೇಲರ ಸಂಕಲ್ಪದಿಂದ ಸೋಮನಾಥ ದೇವಾಲಯ ಪುನಶ್ಚೇತನಗೊಂಡು ೭೫ ವರ್ಷ ಸಂದಿರುವುದನ್ನು ನೆನಪಿಸಿಕೊಂಡರು. ಇದೇ ವೇಳೆ ಪಾಟೀದಾರ್ ಸಮುದಾಯದ ಮುಖಂಡರು ಪ್ರಧಾನಿಯವರಿಗೆ

ಸರ್ದಾರ್ ರತ್ನ ಪ್ರಶಸ್ತಿ ನೀಡಿ ಗೌರವಿಸಿದರು. ಸುಮಾರು ೧೫೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಿರುವ ಸರ್ದಾರ್ ಧಾಮ್ ಸಂಕೀರ್ಣ ೨ ಸಾವಿರ ವಿದ್ಯಾರ್ಥಿಗಳಿಗೆ ವಸತಿ, ಇ-ಲೈಬ್ರರಿ ಮತ್ತು ಸುಸಜ್ಜಿತ ಸಭಾಂಗಣಗಳನ್ನು ಹೊಂದಿದೆ.

<><><>

ಪ್ರಧಾನಿ ನರೇಂದ್ರ ಮೋದಿ ಇದೇ ೧೫ರಿಂದ ಯುಎಇ, ನೆದರ್ಲ್ಯಾಂಡ್ಸ್, ಸ್ವೀಡನ್, ನಾರ್ವೆ ಮತ್ತು ಇಟಲಿ ಸೇರಿದಂತೆ ಐದು ರಾಷ್ಟ್ರಗಳಿಗೆ ಆರು ದಿನಗಳ ಅಧಿಕೃತ ಪ್ರವಾಸ ಕೈಗೊಳ್ಳಲಿದ್ದಾರೆ. ಈ ಭೇಟಿಯು ಯುರೋಪ್ ಮತ್ತು ಯುಎಇ ರಾಷ್ಟ್ರಗಳೊಂದಿಗೆ ಭಾರತದ ದ್ವಿಪಕ್ಷೀಯ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವ ಉದ್ದೇಶ ಹೊಂದಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ಪ್ರವಾಸದ ಮೊದಲ ಚರಣದಲ್ಲಿ, ಯುಎಇ ತಲುಪಲಿರುವ ಪ್ರಧಾನಿಯವರು, ಅಲ್ಲಿನ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರನ್ನು ಭೇಟಿ ಮಾಡಿ ಇಂಧನ ಸಹಕಾರ ಸೇರಿದಂತೆ ಪ್ರಾದೇಶಿಕ ವಿಷಯಗಳ ಬಗ್ಗೆ ಚರ್ಚಿಸಲಿದ್ದಾರೆ. ನಂತರ ನೆದರ್ಲ್ಯಾಂಡ್ಸ್‌ಗೆ ಭೇಟಿ ನೀಡಿ ರಾಜ ವಿಲಿಯಂ-ಅಲೆಕ್ಸಾಂಡರ್ ಮತ್ತು ಪ್ರಧಾನಿ ರಾಬ್ ಜೆಟ್ಟೆನ್ ಅವರೊಂದಿಗೆ ರಕ್ಷಣೆ, ನಾವೀನ್ಯತೆ ಮತ್ತು ಹಸಿರು ಹೈಡ್ರೋಜನ್ ಕ್ಷೇತ್ರಗಳ ಕುರಿತು ಮಾತುಕತೆ ನಡೆಸಲಿದ್ದಾರೆ. ಇದೇ ೧೭ರಂದು ಸ್ವೀಡನ್‌ಗೆ ಪ್ರಯಾಣಿಸಲಿರುವ ಪ್ರಧಾನಿ, ಅಲ್ಲಿನ ಪ್ರಧಾನಿ ಉಲ್ಫ್ ಕ್ರಿಸ್ಟರ್ಸನ್ ಅವರೊಂದಿಗೆ ಪರಿಸರ ಸ್ನೇಹಿ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ ಮತ್ತು ಬಾಹ್ಯಾಕಾಶ ಸಂಶೋಧನೆಯ ಬಗ್ಗೆ ಸಮಾಲೋಚನೆ ನಡೆಸಲಿದ್ದಾರೆ. ಇದೇ ೧೮ರಂದು ನಾರ್ವೆಯಲ್ಲಿ ನಡೆಯಲಿರುವ ೩ನೇ ಭಾರತ-ನಾರ್ಡಿಕ್ ಶೃಂಗಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ; ಕಳೆದ ೪೩ ವರ್ಷಗಳಲ್ಲಿ ಭಾರತದ ಪ್ರಧಾನಿಯೊಬ್ಬರು ನಾರ್ವೆಗೆ ನೀಡುತ್ತಿರುವ ಮೊದಲ ಭೇಟಿ ಇದಾಗಿದೆ. ಪ್ರವಾಸದ ಅಂತಿಮ ಹಂತದಲ್ಲಿ ಇಟಲಿಗೆ ಭೇಟಿ ನೀಡಿ ಅಧ್ಯಕ್ಷ ಸರ್ಜಿಯೋ ಮಟ್ಟರೆಲ್ಲಾ ಮತ್ತು ಪ್ರಧಾನಿ ಜಾರ್ಜಿಯಾ ಮೆಲೋನಿ ಅವರೊಂದಿಗೆ ಉಭಯ ದೇಶಗಳ ಹಿತಾಸಕ್ತಿಯ ವಿಷಯಗಳ ಬಗ್ಗೆ ಚರ್ಚಿಸಲಿದ್ದಾರೆ.

<><><>

ಬಿಜೆಪಿ ನಾಯಕ ಹಿಮಂತ ಬಿಸ್ವಾ ಸರ್ಮಾ ಅವರು ಇಂದು ಅಸ್ಸಾಂನ ಮುಖ್ಯಮಂತ್ರಿಯಾಗಿ ಸತತ ಎರಡನೇ ಬಾರಿಗೆ ಅಧಿಕಾರ ಸ್ವೀಕರಿಸಲಿದ್ದಾರೆ. ಅವರೊಂದಿಗೆ ಮೈತ್ರಿಕೂಟದ ವಿವಿಧ ಪಕ್ಷಗಳ ನಾಲ್ವರು ಸಚಿವರು ಕೂಡ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಅಸ್ಸಾಂ ಇತಿಹಾಸದಲ್ಲಿ

ಇದೇ ಮೊದಲ ಬಾರಿಗೆ ಕಾಂಗ್ರೆಸ್ಸೇತರ ಮುಖ್ಯಮಂತ್ರಿಯೊಬ್ಬರು ಸತತ ಎರಡನೇ ಅವಧಿಗೆ ಆಯ್ಕೆಯಾಗಿರುವುದು. ಹಿರಿಯ ಬಿಜೆಪಿ ನಾಯಕ ರಂಜಿತ್ ಕುಮಾರ್ ದಾಸ್ ಅವರು ವಿಧಾನಸಭಾ ಸ್ಪೀಕರ್ ಹುದ್ದೆಗೆ ಎನ್‌ಡಿಎ ಅಭ್ಯರ್ಥಿಯಾಗಲಿದ್ದಾರೆ. ಹಿಮಂತ ಬಿಸ್ವಾ ಸರ್ಮಾ ಅವರೊಂದಿಗೆ ಬಿಜೆಪಿಯ ರಾಮೇಶ್ವರ್ ತೇಲಿ, ಅಜಂತಾ ನಿಯೋಗ್, ಅಸೋಮ್ ಗಣ ಪರಿಷತ್‌ನ ಅತುಲ್ ಬೋರಾ ಮತ್ತು ಬೋಡೋಲ್ಯಾಂಡ್ ಪೀಪಲ್ಸ್ ಫ್ರಂಟ್‌ನ ಚರಣ್ ಬೋರೋ ಅವರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ಖಾನಾಪಾರ ಪಶುವೈದ್ಯಕೀಯ ಕಾಲೇಜು ಮೈದಾನದಲ್ಲಿ ನಡೆಯಲಿರುವ ಈ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಎನ್‌ಡಿಎ ಆಡಳಿತವಿರುವ ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಮಿಜೋರಾಂ ಮುಖ್ಯಮಂತ್ರಿ ಕೂಡ ಪಾಲ್ಗೊಳ್ಳಲಿದ್ದಾರೆ. ಇತ್ತೀಚೆಗೆ ನಡೆದ ೧೨೬ ಸದಸ್ಯ ಬಲದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟವು ಮೂರನೇ ಎರಡರಷ್ಟು ಬಹುಮತದೊಂದಿಗೆ ಭರ್ಜರಿ ಜಯ ದಾಖಲಿಸಿದೆ.

<><><><>

ಇರಾನ್ ಜೊತೆಗಿನ ಕದನ ವಿರಾಮ ಅತ್ಯಂತ ದುರ್ಬಲ ಸ್ಥಿತಿಯಲ್ಲಿದ್ದು, ಅದು ಕೇವಲ ಜೀವರಕ್ಷಕ ವ್ಯವಸ್ಥೆಯ ಮೇಲಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ತಿಂಗಳುಗಳಿಂದ ನಡೆಯುತ್ತಿರುವ ಯುದ್ಧವನ್ನು ಕೊನೆಗಾಣಿಸಲು ಇರಾನ್ ಕಳುಹಿಸಿದ್ದ ಶಾಂತಿ ಪ್ರಸ್ತಾವನೆಯನ್ನು ಸಂಪೂರ್ಣವಾಗಿ ಒಪ್ಪಲು ಸಾಧ್ಯವಿಲ್ಲ ಎಂದು ತಿರಸ್ಕರಿಸಿದ ಮರುದಿನವೇ ಅಧ್ಯಕ್ಷ ಟ್ರಂಪ್ ಈ ಹೇಳಿಕೆ ನೀಡಿದ್ದಾರೆ. ಶ್ವೇತಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇರಾನ್ ಪ್ರತಿನಿಧಿಗಳು ಕಳುಹಿಸಿರುವ ಆ ಪ್ರಸ್ತಾವನೆಯನ್ನು ಓದಿದ ನಂತರ, ಕದನ ವಿರಾಮ ಅತ್ಯಂರತ ದುರ್ಬಲವಾಗಿದೆ ಎಂಬುದು ಸ್ಪಷ್ಟವಾಗಿದೆ ಎಂದು ತಿಳಿಸಿದ್ದಾರೆ. ಫೆಬ್ರವರಿ ೨೮ ರಂದು ಆರಂಭವಾದ ಈ ಯುದ್ಧದಿಂದಾಗಿ ಜಾಗತಿಕ ತೈಲ ಪೂರೈಕೆಯ ಪ್ರಮುಖ ಸಮುದ್ರ ಮಾರ್ಗವು ಸ್ಥಗಿತಗೊಂಡಿದ್ದು, ಹಲವಾರು ದೇಶಗಳಲ್ಲಿ ಇಂಧನ ಕೊರತೆ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ಇರಾನ್ ಕಳುಹಿಸಿದ್ದ ಪ್ರಸ್ತಾವನೆಯು ಯುದ್ಧದ ಅಂತ್ಯಕ್ಕೆ ದಾರಿಯಾಗಬಹುದು ಎಂಬ

ನಿರೀಕ್ಷೆಯಿತ್ತಾದರೂ, ಅಧ್ಯಕ್ಷ ಟ್ರಂಪ್ ಅದನ್ನು ಸಂಪೂರ್ಣ ಅಸ್ವೀಕಾರಾರ್ಹ ಎಂದು ತಳ್ಳಿಹಾಕಿದ್ದಾರೆ.

<><><><>

ದಕ್ಷಿಣ ದಮ್ ದಮ್ ಮುನ್ಸಿಪಾಲಿಟಿ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಪಶ್ಚಿಮ ಬಂಗಾಳ ಸರ್ಕಾರದ ಮಾಜಿ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಸಚಿವ ಸುಜಿತ್ ಬಸು ಅವರನ್ನು ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಕೊಲ್ಕತ್ತಾದಲ್ಲಿ ಬಂಧಿಸಿದ್ದಾರೆ. ತೃಣಮೂಲ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಬಸು ಅವರು ಆರ್ಥಿಕ ಲಾಭದ ಬದಲಾಗಿ ಸುಮಾರು ೧೫೦ ಅಭ್ಯರ್ಥಿಗಳನ್ನು ವಿವಿಧ ಹುದ್ದೆಗಳಿಗೆ ಶಿಫಾರಸು ಮಾಡಿದ್ದಾರೆ ಎಂದು ಇಡಿ ಅಧಿಕಾರಿಗಳು ಆರೋಪಿಸಿದ್ದಾರೆ. ನಗರಸಭೆಯ ಕೆಲಸ ಕೊಡಿಸಿದ ಪ್ರತಿಯಾಗಿ ಅವರು ಪಡೆದಿರುವ ಅಕ್ರಮ ಹಣದಿಂದ ಫ್ಲಾಟ್‌ಗಳನ್ನು ಖರೀದಿಸಿರುವುದು ತನಿಖೆಯ ವೇಳೆ ಪತ್ತೆಯಾಗಿದೆ ಎಂದು ಇಡಿ ತಿಳಿಸಿದೆ. ಅಲ್ಲದೆ, ಅವರ ನಿಯಂತ್ರಣದಲ್ಲಿರುವ ಬ್ಯಾಂಕ್ ಖಾತೆಗಳಲ್ಲಿ ಭಾರಿ ಪ್ರಮಾಣದ ನಗದು ಜಮೆಯಾಗಿರುವುದನ್ನು ಅಧಿಕಾರಿಗಳು ಗುರುತಿಸಿದ್ದಾರೆ. ಸುಜಿತ್ ಬಸು ಅವರನ್ನು ಇಂದು ವಿಶೇಷ ನ್ಯಾಯಾಲಯಕ್ಕೆ ಹಾಜರುಪಡಿಸಲಾಗುವುದು ಎಂದು ಮೂಲಗಳು ತಿಳಿಸಿವೆ.

<><><><>

ಭಾರತದ ಆಹಾರ ದಾಸ್ತಾನು ಹೇರಳವಾಗಿದೆ ಮತ್ತು ದೇಶದಲ್ಲಿ ಯಾವುದೇ ಆಹಾರದ ಕೊರತೆಯಿಲ್ಲ ಎಂದು ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ನವದೆಹಲಿಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜಗತ್ ಪ್ರಕಾಶ್ ನಡ್ಡಾ ಅವರೊಂದಿಗೆ ಕೃಷಿ ಪರಿವರ್ತನೆ ಮೂಲಕ ಆರೋಗ್ಯಕ್ಕಾಗಿ ವಿಜ್ಞಾನ ಶ್ರೇಷ್ಠತೆ ಉಪಕ್ರಮವನ್ನು ಜಂಟಿಯಾಗಿ ಉದ್ಘಾಟಿಸಿ ಅವರು ಮಾತನಾಡಿದರು. ಸಚಿವರು. ಭಾರತೀಯ ಕೃಷಿ ಸಂಶೋಧನಾ ಮಂಡಳಿ ಮತ್ತು ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ ಜಂಟಿಯಾಗಿ ಪ್ರಾರಂಭಿಸಿದ ಈ ಉಪಕ್ರಮವು ಜನರ ಆರೋಗ್ಯಕರ ಜೀವನಶೈಲಿಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಸೇಹತ್ ಮಿಷನ್, ಉತ್ಪಾದಿಸುವ ಆಹಾರವು ಜನಸಂಖ್ಯೆಯ ಆರೋಗ್ಯ ಅಗತ್ಯಗಳಿಗೆ ಅನುಗುಣವಾಗಿರುವುದನ್ನು ಖಚಿತಪಡಿಸಿಕೊಳ್ಳಲು ಸಹಕಾರಿಯಾಗಿದೆ ಎಂದು ಹೇಳಿದರು. ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜಗತ್ ಪ್ರಕಾಶ್ ನಡ್ಡಾ ಮಾತನಾಡಿ, ಈ ಉಪಕ್ರಮವು ಆರೋಗ್ಯ ಕ್ಷೇತ್ರದಲ್ಲಿ ಸರ್ಕಾರದ ಪೂರ್ವಭಾವಿ, ತಡೆಗಟ್ಟುವ ಮತ್ತು ಸಮಗ್ರ

ವಿಧಾನವನ್ನು ಪ್ರತಿನಿಧಿಸುತ್ತದೆ ಎಂದು ಹೇಳಿದರು. ಆರಂಭಿಕ ರೋಗನಿರ್ಣಯ ಮತ್ತು ನಿರಂತರ ಆರೈಕೆಯ ಮೇಲೆ ಹೆಚ್ಚಿನ ಗಮನ ವಹಿಸಲಾಗಿದೆ.

<><><><>

ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ನಿನ್ನೆ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ದೋಹ್ರಿಘಾಟ್ - ಔನ್ರಿಹಾರ್ ಪ್ಯಾಸೆಂಜರ್ ರೈಲಿಗೆ ಹಸಿರು ನಿಶಾನೆ ತೋರಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಹೊಸ ರೈಲು ಸೇವೆಯು ಮೌ ಮತ್ತು ಘಾಜಿಪುರ ಜಿಲ್ಲೆಗಳ ಪ್ರಯಾಣಿಕರಿಗೆ ಕೈಗೆಟುಕುವ, ಸುರಕ್ಷಿತ ಮತ್ತು ಆರಾಮದಾಯಕ ಸಂಪರ್ಕವನ್ನು ಒದಗಿಸುತ್ತದೆ. ರೈಲನ್ನು ಶೀಘ್ರದಲ್ಲೇ ವಾರಣಾಸಿಯವರೆಗೆ ವಿಸ್ತರಿಸಲಾಗುವುದು ಎಂದು ಮಾಹಿತಿ ನೀಡಿದರು. ಉತ್ತರ ಪ್ರದೇಶದಲ್ಲಿ ಪ್ರಗತಿಯಲ್ಲಿರುವ ಪ್ರಮುಖ ರೈಲ್ವೆ ಮೂಲಸೌಕರ್ಯ ಯೋಜನೆಗಳನ್ನು ಸಚಿವರು ವಿವರಿಸಿದರು. ಗಂಗಾ ನದಿಯ ದಕ್ಷಿಣಕ್ಕೆ, ಪ್ರಯಾಗ್‌ರಾಜ್-ಕಾನ್ಪುರ್-ಆಗ್ರಾ-ದೆಹಲಿ ಮಾರ್ಗದಲ್ಲಿ ಪ್ರಮುಖ ನಾಲ್ಕು-ಮಾರ್ಗದ ಕಾರಿಡಾರ್ ಅನ್ನು ಅಭಿವೃದ್ಧಿಪಡಿಸಲಾಗಿದೆ ಎಂದು ಅವರು ಹೇಳಿದರು.

<><><><>

ಹಿಮಾಚಲ ಪ್ರದೇಶದ ಧರ್ಮಶಾಲಾದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡದ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ ತಂಡ ೩ ವಿಕೆಟ್‌ಗಳ ಜಯ ದಾಖಲಿಸಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಪಂಜಾಬ್ ತಂಡ ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೨೧೦ ರನ್ ಗಳಿಸಿತು. ಪ್ರತಿಯಾಗಿ ೨೧೧ ರನ್‌ಗಳ ಗುರಿ ಬೆನ್ನತ್ತಿದ ಡೆಲ್ಲಿ ತಂಡ ೧೯ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೨೧೭ ರನ್ ಗಳಿಸಿ ಗೆಲುವು ತನ್ನದಾಗಿಸಿಕೊಂಡಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮಯಕ್ತಾಯವಾಯಿತು <><>